**All India Radio: Bangalore**
**Regional Bulletin In Kannada**
**17.05.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರು-ಮುಂಬೈ ನಡುವೆ ನೂತನ ದ್ವೈಸಾಪ್ತಾಹಿಕ ರೈಲು ಸೇವೆಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ವರ್ಚುವಲ್ ಮೂಲಕ ಚಾಲನೆ
2. ಜೂನ್ ೧ರಂದು ರಾಜ್ಯಾದ್ಯಂತ ಶಾಲಾ ಪ್ರಾರಂಭೋತ್ಸವ ; ೪೬ ಸಾವಿರ ಶಿಕ್ಷಕರು ಹಾಗೂ ಅಧಿಕಾರಿಗಳೊಂದಿಗೆ ಸಚಿವ ಮಧುಬಂಗಾರಪ್ಪ ಸಂವಾದ
3. ಸ್ವಚ್ಛ ಮತ್ತು ಆರೋಗ್ಯಕರ ಬೆಂಗಳೂರು ನಿರ್ಮಾಣಕ್ಕೆ ನಾಗರಿಕರು ಕೈ ಜೋಡಿಸಲು - ಆಯುಕ್ತ ರಾಜೇಂದ್ರ ಚೋಳನ್ ಕರೆ
4. ವಿಜಯಪುರದಲ್ಲಿ ಇಂದಿನಿಂದ ರಾಜ್ಯಮಟ್ಟದ ೧೫ ಹಾಗೂ ೧೭ ವರ್ಷದೊಳಗಿನವರ ಬ್ಯಾಡ್ಮಿಂಟನ್ ಟೂರ್ನಿ ; ೭೫೬ ಕ್ರೀಡಾಪಟುಗಳು ಕಣದಲ್ಲಿ

<><><><>

ನೈಋತ್ಯ ರೈಲ್ವೆ, ದಕ್ಷಿಣ-ಮಧ್ಯ ರೈಲ್ವೆ ಮತ್ತು ಪಶ್ಚಿಮ ರೈಲ್ವೆ ವಲಯಗಳ ಸಹಯೋಗದೊಂದಿಗೆ ಸರ್.ಎಂ.ವಿಶ್ವೇಶ್ವರಯ್ಯ ಟರ್ಮಿನಲ್-ಎಸ್‌ಎಂವಿಟಿಯಿಂದ ಮುಂಬೈನ ಲೋಕಮಾನ್ಯ ತಿಲಕ್ ಟರ್ಮಿನಸ್‌ಗೆ ವಾರದಲ್ಲಿ ಎರಡು ದಿನ ಸಂಚರಿಸಲಿರುವ ನೇರ ರೈಲು ಸೇವೆಗೆ ಇಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ವರ್ಚುವಲ್ ಮೂಲಕ ಚಾಲನೆ ನೀಡಿದರು. ಬೆಂಗಳೂರಿನ ಎಸ್‌ಎಂವಿಟಿ ಬೆಂಗಳೂರು ರೈಲ್ವೆ ನಿಲ್ದಾಣದಲ್ಲಿ ಆಯೋಜಿಸಲಾದ ಹೊಸ ದ್ವೈಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸೇವೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಪಾಲ್ಗೊಂಡು ಹಸಿರು ನಿಶಾನೆ ತೋರಿದರು. ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ.ಮೋಹನ್ ಉಪಸ್ಥಿತರಿದ್ದರು. ಸಂಸದ ತೇಜಸ್ವಿ ಸೂರ್ಯ ವರ್ಚುವಲ್ ಮೂಲಕ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಈ ಹೊಸ ರೈಲು ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಸೇರಿದಂತೆ ಪ್ರಮುಖ ಏಳು-ಎಂಟು ನಿಲ್ದಾಣಗಳಲ್ಲಿ ಮಾತ್ರ ನಿಲ್ಲಲಿದ್ದು,

ಮುಂಬೈಗೆ ಅತ್ಯಂತ ವೇಗವಾಗಿ ತಲುಪಲಿದೆ ಎಂದರು. ಇದರ ಜೊತೆಗೆ ಕೋವಿಡ್ ಸಮಯದಲ್ಲಿ ಸ್ಥಗಿತಗೊಂಡಿದ್ದ ೩೭ ರೈಲುಗಳ ಸಂಚಾರವನ್ನು ಪುನರ್ ಆರಂಭಿಸಲು ರೈಲ್ವೆ ಸಚಿವರು ಅನುಮೋದನೆ ನೀಡಿದ್ದಾರೆ ಎಂದು ತಿಳಿಸಿದರು. ರೈಲ್ವೆ ಬಜೆಟ್ ಅನ್ನು ಸಾಮಾನ್ಯ ಬಜೆಟ್‌ನೊಂದಿಗೆ ವಿಲೀನಗೊಳಿಸಿ ರೈಲ್ವೆ ಇಲಾಖೆಗೆ ದಾಖಲೆಯ ಎರಡು ಲಕ್ಷದ ೯೩ ಸಾವಿರ ಕೋಟಿ ರೂಪಾಯಿಗಳನ್ನು ನೀಡಲಾಗಿದೆ ಎಂದರು. ರಾಜ್ಯದಲ್ಲಿ ಪ್ರಸ್ತುತ ೩ ಸಾವಿರದ ೭೪೦ ಕಿಲೋಮೀಟರ್ ಉದ್ದದ ರೈಲ್ವೆ ಯೋಜನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ. ೨೦೧೪ರಿಂದ ಈವರೆಗೆ ರಾಜ್ಯದಲ್ಲಿ ೩ ಸಾವಿರದ ೭೪೨ ಕಿಲೋಮೀಟರ್ ಮಾರ್ಗದ ವಿದ್ಯುದೀಕರಣ ಪೂರ್ಣಗೊಂಡಿದ್ದು, ಶೇಕಡ ೯೭ರಷ್ಟು ಕಾಮಗಾರಿ ಮುಕ್ತಾಯಗೊಂಡಿದೆ. ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿ ೬೯ ರೈಲ್ವೆ ನಿಲ್ದಾಣಗಳ ಆಧುನೀಕರಣಕ್ಕೆ ೨ ಸಾವಿರದ ೧೬೦ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

**ಧ್ವನಿ : ವಿ.ಸೋಮಣ್ಣ**

<><><><>

ಮುಂಬರುವ ಜೂನ್ ೧ ರಂದು ರಾಜ್ಯಾದ್ಯಂತ ಹೊಸ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ನೆರವೇರಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿದ್ಯಾರ್ಥಿಗಳನ್ನು ಶಾಲೆಗಳಿಗೆ ಬರಮಾಡಿಕೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಏಕಕಾಲಕ್ಕೆ ನಡೆಯಲಿರುವ ಮಹಾ ಪೋಷಕ, ಶಿಕ್ಷಕರ ಸಭೆಯನ್ನು ಉದ್ದೇಶಿಸಿ ಮುಖ್ಯಮಂತ್ರಿ ವಿಡಿಯೋ ಕಾನ್ಫರೆನ್ಸ್ ಮೂಲಕ ಪೋಷಕರು ಹಾಗೂ ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ನಡೆಸಲಿದ್ದಾರೆ. ಇದರ ಜೊತೆಗೆ ಶಿವಮೊಗ್ಗದಲ್ಲಿ ನಿರ್ಮಾಣವಾಗಲಿರುವ ನೂತನ ಕರ್ನಾಟಕ ಪಬ್ಲಿಕ್ ಸ್ಕೂಲ್-ಕೆಪಿಎಸ್ ಕಟ್ಟಡಕ್ಕೆ ಮುಖ್ಯಮಂತ್ರಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಹೊಸ ಶೈಕ್ಷಣಿಕ ವರ್ಷದ ಪೂರ್ವಸಿದ್ಧತೆಗಳ ಕುರಿತು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ಇಲಾಖೆಯ ಅಧಿಕಾರಿಗಳು ಹಾಗೂ ಸುಮಾರು ೪೬ ಸಾವಿರ ಸರ್ಕಾರಿ ಶಾಲೆಗಳ ಶಿಕ್ಷಕರೊಂದಿಗೆ ವಿಡಿಯೋ ಸಂವಾದ ನಡೆಸಿದರು. ಇತ್ತೀಚಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗಳ ಫಲಿತಾಂಶಕ್ಕಾಗಿ ಇಲಾಖೆಯ ಶ್ರಮವನ್ನು ಶ್ಲಾಘಿಸಿದ ಸಚಿವರು ಮುಂದಿನ ವರ್ಷವು ಉತ್ತಮ ಸಾಧನೆ ಕಾಯ್ದುಕೊಳ್ಳಲು ಕರೆ ನೀಡಿದರು.

<><><><>

ಸ್ವಚ್ಛ ಭಾರತ್ ಮಿಷನ್ ನಗರ ೨.೦ ಯೋಜನೆಯಡಿ ಜಲಮೂಲಗಳ ಸಂರಕ್ಷಣೆ ತ್ಯಾಜ್ಯ ವಿಂಗಡನೆ ಹಾಗೂ ಏಕಬಳಕೆ ಪ್ಲಾಸ್ಟಿಕ್ ನಿಷೇಧದ ಕುರಿತು ಜಾಗೃತಿ ಮೂಡಿಸಲು ಬೆಂಗಳೂರು ಕೇಂದ್ರ ನಗರ ಪಾಲಿಕೆ ವತಿಯಿಂದ ನಗರದ ಮೂರು ಸ್ಥಳಗಳಲ್ಲಿ ಸಮುದಾಯ ಬೀದಿ ನಾಟಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಪ್ರದರ್ಶನ ವೀಕ್ಷಿಸಿ ಮಾತನಾಡಿದ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಸ್ವಚ್ಛ ಮತ್ತು ಆರೋಗ್ಯಕರ ಬೆಂಗಳೂರು ನಿರ್ಮಾಣಕ್ಕೆ ನಾಗರಿಕರ ಸಹಕಾರ ಬಹುಮುಖ್ಯ ಎಂದರು. ನಗರದ ಸೌಂದರ್ಯಕ್ಕೆ ಮಾರಕವಾಗಿರುವ ತ್ಯಾಜ್ಯ ಸುರಿದು ನಿರ್ಮಾಣವಾಗುವ ಕಪ್ಪುಚುಕ್ಕೆ ಸ್ಥಳಗಳ ನಿರ್ಮೂಲನೆ ಮಾಡಲು ಸಾರ್ವಜನಿಕರು, ಸಂಘಸಂಸ್ಥೆಗಳು ಪಾಲಿಕೆಯೊಂದಿಗೆ ಸಕ್ರಿಯವಾಗಿ ಕೈಜೋಡಿಸಬೇಕು ಎಂದರು.

<><><><>

ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ಮತ್ತು ಬಿಎಲ್‌ಡಿಇ ಸಂಸ್ಥೆಯ ಸಹಯೋಗದಲ್ಲಿ 'ಯೋನೆಕ್ಸ್ ಸನ್ ರೈಸ್' ರಾಜ್ಯಮಟ್ಟದ ೧೫ ಮತ್ತು ೧೭ ವಯೋಮಿತಿಯೊಳಗಿನವರ ಬ್ಯಾಡ್ಮಿಂಟನ್ ಟೂರ್ನಿಯು ಇಂದಿನಿಂದ ಮೇ ೨೩ರವರೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಿಎಲ್‌ಡಿಇ ಒಳಾಂಗಣ ಕ್ರೀಡಾಂಗಣಗಳಲ್ಲಿ ನಡೆಯುತ್ತಿದೆ. ಗ್ರಾಮೀಣ ಭಾಗದಲ್ಲಿ ಕ್ರೀಡೆಗೆ ಉತ್ತೇಜನ ನೀಡುವ ಉದ್ದೇಶದಿಂದ ವಿಜಯಪುರದಲ್ಲಿ ಇದೇ ಮೊದಲ ಬಾರಿಗೆ ಈ ಪ್ರತಿಷ್ಠಿತ ಟೂರ್ನಿಯನ್ನು ಆಯೋಜಿಸಲಾಗಿದೆ. ಪಂದ್ಯಾವಳಿಯಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದ ಒಟ್ಟು ೭೫೬ ಆಟಗಾರರು ಪಾಲ್ಗೊಳ್ಳುತ್ತಿದ್ದಾರೆ. ಪ್ರತಿದಿನ ಬೆಳಿಗ್ಗೆ ೮ ರಿಂದ ಸಂಜೆ ೬ರ ವರೆಗೆ ಪಂದ್ಯಗಳು ನಡೆಯುತ್ತಿದ್ದು, ಇಂದಿನಿಂದ ಇದೇ ೨೦ರವರೆಗೆ ಅರ್ಹತಾ ಸುತ್ತಿನ ಪಂದ್ಯಗಳು ಹಾಗೂ ಇದೇ ೨೧ ರಿಂದ ೨೩ರವರೆಗೆ ಮುಖ್ಯ ಡ್ರಾ ಪಂದ್ಯಗಳು ಜರುಗಲಿವೆ. ೨೨ರಂದು ಕ್ವಾರ್ಟರ್ ಫೈನಲ್ ಮತ್ತು ಸೆಮಿಫೈನಲ್ ಪಂದ್ಯಗಳು ನಡೆದರೆ, ಇದೇ ೨೩ ರಂದು ಅಂತಿಮ ಫೈನಲ್ ಪಂದ್ಯ ನಡೆಯಲಿದೆ.

<><><><>

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿ ಅಂಗೀಕರಿಸಲು ಯಾವದೇ ತೊಂದರೆಯಿಲ್ಲ" ಎಂದು ಬಿಜೆಪಿ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಕನ್ನಡ ಸಂಘಟನೆಗಳ ಕಾರ್ಯಕರ್ತರು ರವಿಕುಮಾರ ಅವರನ್ನು ಭೇಟಿ ಮಾಡಿ, ಕರ್ನಾಟಕಪರ ಗೊತ್ತುವಳಿ ಅಂಗೀಕರಿಸಲು

ಮುಂದಾಗಬೇಕೆಂದು ಮನವಿ ಸಲ್ಲಿಸಿದಾಗ ಪ್ರತಿಕ್ರಿಯೆ ನೀಡಿದ ಅವರು, ಈ ಬಗ್ಗೆ ಬೆಳಗಾವಿ ಮಹಾನಗರ ಪಾಲಿಕೆ ಮಹಾಪೌರ ಹಾಗೂ ಉಪ ಮಹಾಪೌರರೊಂದಿಗೆ ಸಮಾಲೋಚಿಸಿ ಕ್ರಮಕ್ಕೆ ಸೂಚಿಸಲಾಗುವುದು ಎಂದು ತಿಳಿಸಿದರು.

<><><><>

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಿಬ್ಬಂದಿ ಇದೇ ೨೦ ರಿಂದ ಅನಿರ್ದಿಷ್ಟ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಸಾರಿಗೆ ವ್ಯವಸ್ಥೆಗೆ ತೊಂದರೆ ಆಗದಂತೆ ಪರ್ಯಾಯ ಕ್ರಮ ಕೈಗೊಳ್ಳುವ ಕುರಿತು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸಭೆ ನಡೆಸಿದರು. ಪ್ರಸ್ತುತ ತೀವ್ರ ಬೇಸಿಗೆ ಇರುವ ಕಾರಣ ಪ್ರಯಾಣಿಕರಿಗೆ ಸಮರ್ಪಕ ಸಾರಿಗೆ ಸೌಕರ್ಯ ಒದಗಿಸಬೇಕಾದ ಜವಾಬ್ದಾರಿ ತಮ್ಮ ಮೇಲಿದೆ. ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳಲ್ಲಿ ಪ್ರಯಾಣಿಸುತ್ತಿರುವ, ಸಂದರ್ಭದಲ್ಲಿ ಸಾರಿಗೆ ಸಿಬ್ಬಂದಿ ಕರ್ತವ್ಯಗಳಿಗೆ ಗೈರು ಹಾಜರಾಗಬಾರದು. ತಮ್ಮ ಸಾರ್ವಜನಿಕ ಸೇವೆ ಆದ್ಯತೆಯಾಗಿ ಪರಿಗಣಿಸಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಹಳ್ಳಿಗಳಿಂದ ವಿವಿಧ ತಾಲೂಕು ಮತ್ತು ಜಿಲ್ಲಾ ಕೇಂದ್ರಕ್ಕೆ ಹಾಗೂ ಬೆಂಗಳೂರಿಗೆ ಪ್ರಯಾಣಿಸುವ ಜನರ ಅನುಕೂಲಕ್ಕಾಗಿ ಸುಗಮ ಕಾರ್ಯಾಚರಣೆಗೆ ಯಾವುದೇ ಅಡ್ಡಿಯಾಗದಂತೆ ಸಾರಿಗೆ ಸಂಸ್ಥೆ ಎಲ್ಲಾ ಪರ್ಯಾಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

<><><><>

ಬಕ್ರಿದ್ ಹಬ್ಬದ ಸಂದರ್ಭದಲ್ಲಿ ನಗರದ ಸಾರ್ವಜನಿಕ ಶಾಂತಿ, ಸುವ್ಯವಸ್ಥೆ ಮತ್ತು ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ಬೆಂಗಳೂರು ಉತ್ತರ ನಗರಪಾಲಿಕೆ ಮಹತ್ವದ ಕ್ರಮ ಕೈಗೊಂಡಿದೆ. ನಗರದ ವಿವಿಧ ಪ್ರದೇಶಗಳಲ್ಲಿ ನಿಯಮ ಬಾಹಿರವಾಗಿ ಮತ್ತು ಅನುಮತಿ ಪಡೆಯದೇ ಅನಧಿಕೃತವಾಗಿ ನಿರ್ಮಿಸಲಾಗಿರುವ ತಾತ್ಕಾಲಿಕ ಕುರಿ ಮತ್ತು ಮೇಕೆ ಮಾರುಕಟ್ಟೆ ಶೆಡ್‌ಗಳ ವಿರುದ್ಧ ಪಾಲಿಕೆ ಜಂಟಿ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಂಡು ಯಶಸ್ವಿಯಾಗಿ ತೆರವುಗೊಳಿಸಿದೆ. ನಗರ ಪಾಲಿಕೆ ಆಯುಕ್ತ ಪಿ.ಸುನೀಲ್ ಕುಮಾರ್ ಅವರ ಕಟ್ಟುನಿಟ್ಟಿನ ನಿರ್ದೇಶನದ ಮೇರೆಗೆ ಈ ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿತ್ತು.

<><><><>

ಹಾವೇರಿ, ರಾಣೇಬೆನ್ನೂರ, ಬ್ಯಾಡಗಿ ಮತ್ತು ಹಿರೇಕೆರೂರು ಪಟ್ಟಣಗಳಿಗೆ ಹಾಗೂ ನದಿ ಪಾತ್ರದ ಗ್ರಾಮಗಳಿಗೆ ಬಹುಗ್ರಾಮ ಯೋಜನೆಯಡಿ ಕುಡಿಯುವ ನೀರನ್ನು ಪೂರೈಸಲು ಭದ್ರಾ

ಜಲಾಶಯದಿಂದ ತುಂಗಭದ್ರಾ ನದಿಗೆ ನೀರನ್ನು ಹರಿಸಲು ನಿರ್ಧರಿಸಲಾಗಿದ್ದು, ಈ ಭಾಗದ ನದಿ ಪಾತ್ರದ ಜನರು ಎಚ್ಚರಿಕೆ ವಹಿಸಬೇಕೆಂದು ಭದ್ರಾ ಜಲಾಶಯ ಅಧೀಕ್ಷಕರ ಪ್ರಕಟಣೆ ತಿಳಿಸಿದೆ. ತುಂಗಭದ್ರಾ ನದಿಯನ್ನು ಅವಲಂಬಿಸಿರುವ ನಗರ ಮತ್ತು ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಅಗತ್ಯಕ್ಕಾಗಿ, ನಾಳೆಯಿಂದ ಇದೇ ೨೩ ರವರೆಗೆ ಪ್ರತಿದಿನ ೨೦೦೦ ಕ್ಯೂಸೆಕ್ಸ್ ನಂತೆ ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ನೀರನ್ನು ಹರಿಸಲಾಗುವುದು. ನದಿಗೆ ಗಣನೀಯ ಪ್ರಮಾಣದಲ್ಲಿ ನೀರು ಹರಿಸುತ್ತಿರುವುದರಿಂದ ನದಿಯ ದಂಡೆಯ ಕೆಳಮಟ್ಟದಲ್ಲಿ ಸಾರ್ವಜನಿಕರು ತಿರುಗಾಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

<><><><>

ಬುಡಕಟ್ಟು ಸಮುದಾಯದ ಜನರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಜನಕಲ್ಯಾಣ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವ ಉದ್ದೇಶದಿಂದ ಬಳ್ಳಾರಿ ಜಿಲ್ಲೆಯಲ್ಲಿ ನಾಳೆಯಿಂದ ಇದೇ ೨೫ರವರೆಗೆ 'ಜನ ಭಾಗಿದಾರಿ - ಸಬ್‌ಸೇ ದೂರ್, ಸಬ್‌ಸೇ ಪೆಹ್ಲೆ' ಐಇಸಿ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೊದಿನ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>